18

2

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ರವರು ಪ್ರಸ್ತಾಪಿಸಿರುವ ನಿಯಮ 72ರ ಸೂಚನೆಗೆ ಉತ್ತರ

**ಪ್ರಶ್ನೆ:**-ದಿನಾಂಕ:15.05.2024ರಂದು ಹುಬ್ಬಳ್ಳಿ ನಗರದಲ್ಲಿ ಹತ್ಯೆಯಾದ ಅಂಜಲಿ ಮೋಹನ ಅಂಬಿಗ ಇವರ ಕೊಲೆ ಪ್ರಕರಣಕ್ಕೆ ಸಂಬಂಧಸಿದಂತೆ ಮೃತರ ಕುಟುಂಬಕ್ಕೆ ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿರುವ ಹಾಗೂ ರಾಜ್ಯದಲ್ಲಿ ಕೊಲೆ ಹತ್ಯೆ ಪ್ರಕರಣದಲ್ಲಿ ಭಾಗಿಯಾದವರನ್ನು ನಿಷ್ಪಕ್ಷಪಾತ ತನಿಖೆಗೆ ಒಳಪಡಿಸಿ ಫಾಸ್ಟ್ ಟ್ರ್ಯಾಕ್ ಕೋರ್ಟ್ ಮುಖಾಂತರ ಅತೀ ಶೀಘ್ರದಲ್ಲಿ ಶಿಕ್ಷೆಯಾಗುವಂತೆ ಮಾಡುವ ಕುರಿತು.

*******

**ಉತ್ತರ:**- ದಿನಾಂಕ: 15/05/2024 ರಂದು ಹುಬ್ಬಳ್ಳಿ ನಗರದಲ್ಲಿ ಹತ್ಯೆಯಾದ ಅಂಜಲಿ ಮೋಹನ ಅಂಬೀಗೇರ ಇವರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹುಬ್ಬಳ್ಳಿ-ಧಾರವಾಡ ನಗರ, ಬೆಂಡಿಗೇರಿ ಪೊಲೀಸ್ ಠಾಣೆ ಅಪರಾಧ ಸಂಖ್ಯೆ:47/2024 ಕಲಂ 302, 201 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿರುತ್ತದೆ. ಸದರಿ ಪ್ರಕರಣವನ್ನು ಪೊಲೀಸ್ ಪ್ರಧಾನ ಕಛೇರಿಯ ಆದೇಶ ಸಂಖ್ಯೆ: ಎಲ್‌ಅಂಡ್‌ಒ-3/115/2024-25 ದಿನಾಂಕ: 20.05.2024ರಂದು ಸಿ.ಐ.ಡಿ ಘಟಕಕ್ಕೆ ವರ್ಗಾಯಿಸಲಾಗಿರುತ್ತದೆ. ಸದರಿ ಪ್ರಕರಣದ ಮುಂದಿನ ತನಿಖೆಯನ್ನು ಸಿ.ಐ.ಡಿ ಘಟಕವು ಕೈಗೊಂಡಿರುತ್ತದೆ. ಪ್ರಸ್ತುತ ಪ್ರಕರಣವು ಸಿಐಡಿ ತನಿಖೆಯಲ್ಲಿರುತ್ತದೆ.

ಮುಂದುವರೆದು, ರಾಜ್ಯದಲ್ಲಿ ವರದಿಯಾಗುವ ಕೊಲೆ/ಹತ್ಯೆ ಪ್ರಕರಣಗಳ ತನಿಖೆಯನ್ನು ನಿಷ್ಪಕ್ಷಪಾತವಾಗಿ ಕೈಗೊಂಡು ಆರೋಪಿಗಳನ್ನು ದಸ್ತಗಿರಿ ಮಾಡಿ ವೈಜ್ಞಾನಿಕವಾಗಿ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ತನಿಖೆಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲು ಕ್ರಮ ವಹಿಸಲಾಗುತ್ತಿದೆ. ಘನ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿದ ನಂತರವೂ ಘನ ನ್ಯಾಯಲಯ ನಿಗದಿಪಡಿಸುವ ವಿಚಾರಣಾ ದಿನಾಂಕಗಳಂದು ಸಾಕ್ಷಿದಾರರಿಗೆ ಘನ ನ್ಯಾಯಾಲಯದ ಮುಂದೆ ಹಾಜರಾಗಿ ಸಾಕ್ಷಿ ನುಡಿಯುವಂತೆ ತಿಳುವಳಿಕೆಯನ್ನು ನೀಡಲಾಗುತ್ತಿದೆ. ಸದರಿಯವರು ನುಡಿದಿರುವ ಸಾಕ್ಷ್ಯದ ಬಗ್ಗೆ ಕೋರ್ಟ್ ಮಾನಿಟರಿಂಗ್ ಸೆಲ್ ಮುಖಾಂತರ ಮನವರಿಕೆ ಮಾಡಿಕೊಂಡಿದ್ದು, ಪುರಕಣದ ತ್ವರಿತ ವಿಚಾರಣೆಗೆ ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಸಂಖ್ಯೆ:ಹೆಚ್‌ಡಿ 33 ಎಸ್‌ಡಿಎನ್ 2024

(ಡಾ:ಜಿ.ಪರಮೇಶ್ವರ)
ಗೃಹ ಸಚಿವರು